# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ವಿಜಾಪೂರ ಜಿಲ್ಲೆ ವಿಜಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಮಹಾ ಯೋಜನೆಗೆ (ಪ-1)ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ:- 1)ಸರ್ಕಾರದ ಆದೇಶ ಸಂ.ನಅಇ:116:ಬೆಮಪ್ರಾ:2004, ಬೆಂಗಳೂರು ದಿನಾಂಕ:30-6-2005.

2)ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ವಿಜಾಪುರ ಇವರ ಪತ್ರ ಸಂ.ನಪ್ರಾವಿ:ಮಂಯೋ:2000-01:287:ದಿನಾಂಕ: 21-6-2006/21-7-2006.

3)ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ ದಿ:28-10-06.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ವಿಜಾಪುರ ಜಿಲ್ಲೆ ವಿಜಾಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ -1)ಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ವಿಜಾಪುರ ನಗರಾಭಿವೃದ್ಧಿ ಪ್ರಾಧಿಕಾರವು ವಿಜಾಪುರ ಜಿಲ್ಲೆ ವಿಜಾಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾರ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾಯೋಜನೆ (ಪರಿಷ್ಕೃತ -1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರಲ್ಲಿ ನಗರ ಯೋಜನಾ ನಿರ್ದೇಶಕರು, ವಿಜಾಪುರ ಪಟ್ಟಣದ ಜನಸಂಖ್ಯೆಯು 2021ರಲ್ಲಿ 05 ಲಕ್ಷಕ್ಕೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ವಿಜಾಪುರ ಸ್ಥಳೀಯ ಯೋಜನಾ ಪ್ರದೇಶದ 42090 ಹೆಕ್ಟೇರ್ ಪ್ರದೇಶದಲ್ಲಿ 6827.65ಹೆ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 6827.65 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 2983.96 ಹೆಕ್ಟೇರ್, ವಾಣಿಜ್ಯಕ್ಕೆ 371.99 ಹೆ,

ಪ೦/ನಿ 13/12 13/12

444 13/12/06

ಕೈಗಾರಿಕೆಗಾಗಿ 514.60 ಹೆ, ನಾಗರೀಕ ಸೌಲಭ್ಯಕ್ಕಾಗಿ 177.16ಹೆ, ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕೆ 1005.38ಹೆ, ಉದ್ಯಾನವನ: ಬಯಲು ಜಾಗಗಳಿಗ 741.55ಹೆ, ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆ (ಪ-1) ಯನ್ನು ಅನುಷ್ಠಾನಕ್ಕೆ ತರಲು ಆಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(1)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಈ ವಿಷಯವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ನಅಇ 325 ಬೆಮಪ್ರಾ 2006, ಬೆಂಗಳೂರು,ದಿನಾಂಕ:7-12-2006

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ವಿಜಾಪುರ ಜಿಲ್ಲೆ ವಿಜಾಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ವೈ.ಸಾಗರ) 7/12/06
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಬಿಜಾಪುರ.
3) ನಗರ ಯೋಜನಾ ಸಹಾಯಕ ನಿರ್ದೇಶಕರು ಬಿಜಾಪುರ, ನಗರ ಯೋಜನಾ ಇಲಾಖೆ,ಬಿಜಾಪುರ.
4) ಮಾನ್ಯ ಮುಖ್ಯ ಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5) ಕರ್ನಾಟಕ ರಾಜ್ಯ ಪತ್ರ.
6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.